(ಧರಣಿ ನಿರತ ಕಾಂಗ್ರೆಸ್ ಮತ್ತು ಜೆ.ಡಿ.(ಎಸ್)ಸದಸ್ಯರು ಸದನದ ಬಾವಿಯೊಳಗಿಂದ ಕಲಾಪದುದ್ದಕ್ಕೂ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)

5 ಶಾಸನ ರಚನೆ:

(i) ವಿಧೇಯಕಗಳನ್ನು ಮಂಡಿಸುವುದು:

(ಅ) ಕರ್ನಾಟಕ ಧನವಿನಿಯೋಗ(ಸಂಖ್ಯೆ 2) ವಿಧೇಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ-II)

(ಆ) ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–III)

(ii) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಅ) ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕ, 2010

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, "2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3ರವರೆಗೆ

ಅಧ್ಯಕ್ಷರು: "ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸಾವದ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.